ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2023-24 ನೇ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ಸಾರ್ವತ್ರಿಕ ವರ್ಗಾವಣೆ ಮಾರ್ಗಸೂಚಿಗಳು.

ಓದಲಾಗಿದೆ:

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ: 07.06.2013.

ಪ್ರಸ್ತಾವನೆ:

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಮತ್ತು ಜೂನ್ ತಿಂಗಳುಗಳಲ್ಲಿ ಮಾತ್ರ ಸದರಿ ಮಾರ್ಗಸೂಚಿಗಳಲ್ಲಿರುವ ಷರತ್ತುಗಳಿಗೊಳಪಟ್ಟು ಮಾಡಬಹುದಾಗಿದೆ.

2023-24ನೇ ಸಾಲಿಗೆ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದ ಅಧಿಕಾರಿ/ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6ರಷ್ಟನ್ನು ಮೀರದಂತೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲು ನಿರ್ಧರಿಸಿರುವುದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 7 ಸೇನೌವ 2023, ಬೆಂಗಳೂರು,
ದಿನಾಂಕ: 30.05.2023.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು, 2023-24ನೇ ಸಾಲಿಗೆ ಗ್ರೂಪ್-ಎ, ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ವರ್ಗದ ಅಧಿಕಾರಿ/ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6ರಷ್ಟನ್ನು ಮೀರದಂತೆ **ದಿನಾಂಕ: 01.06.2023 ರಿಂದ ದಿನಾಂಕ: 15.06.2023ರವರೆಗೆ** ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Hemalatha. G.
30/05/23

(ಹೇಮಲತ ಜಿ.)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ.),
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು–1)

ಇವರಿಗೆ:

ಸಂಕಲನಕಾರರು, ಇ-ರಾಜ್ಯಪತ್ರ.

.2...

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು.
5. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
15. *ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು.
17. *ನಿವಾಸಿ ಆಯುಕ್ತರು, ಕರ್ನಾಟಕ ಭವನ, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ- 110011.
18. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತಕಾರ್ಯದರ್ಶಿಗಳು.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಸಚಿವಾಲಯದ ಎಲ್ಲಾ ಶಾಖೆಗಳು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
22. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)